ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಗ್ರಾಮ ಪಂಚಾಯತಿಗಳಲ್ಲಿರುವ ಬಾಪೂಜಿ ಸೇವಾ ಕೇಂದ್ರಗಳ ಮೂಲ ಸೌಕರ್ಯಗಳ ಬಗ್ಗೆ

ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

130 (982) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮ ಪಂಚಾಯ್ತಿಗಳು ಬಾಪೂಜಿ ಸೇವಾ ಕೇಂದ್ರದವರಿಂದ ಎಷ್ಟು ಸೇವೆಗಳನ್ನು ಒದಗಿಸುತ್ತಿವೆ ; (ಕಳೆದ 3 ವರ್ಷಗಳ ಮಾಹಿತಿಯನ್ನು ನೀಡುವುದು)

(ಆ) ಬಾಪೂಜಿ ಸೇವಾ ಕೇಂದ್ರದವತಿಯಿಂದ ಸೇವೆಗಳನ್ನು ಗುರುತಿಸಿರುವ ಎಲ್ಲಾ ಸೇವೆಗಳನ್ನು ಒದಗಿಸಲು ಎಲ್ಲಾ ಗ್ರಾಮ ಪಂಚಾಯ್ತಿಗಳಲ್ಲಿ ಡೇಟಾ ಎಂಟ್ರಿ ಆಪರೇಟರ್ಗಳ ಹುದ್ದೆ ಲಭ್ಯವಿದೆಯೇ ; ಇಲ್ಲದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಗ್ರಾಮ ಪಂಚಾಯ್ತಿಗಳು ಸ್ಥಳೀಯ ಸ್ವಯಂ ಸರ್ಕಾರವಾಗಿ ಆಡಳಿತ ನೀಡಲು ಸಂವಿಧಾನ ಅವಕಾಶ ನೀಡಿದ್ದರೂ ಈ ಕೇಂದ್ರದಲ್ಲಿ ಎದುರಿಸುತ್ತಿರುವ ಮೂಲ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಗ್ರಾಮ ಪಂಚಾಯತಿಗೊಬ್ಬ ಡೇಟಾ ಎಂಟ್ರಿ ಆಪರೇಟರ್ ನೇಮಕಾತಿಗೆ ಸರ್ಕಾರ ಹೊರಡಿಸಿದ್ದ ಅಧಿಸೂಚನೆಯನ್ವಯ ನ್ಯಾಯಾಲಯದ ಹಾಲಿ ಪ್ರಕ್ರಿಯೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)